ಶ್ರೀ ಹೆಚ್.ಜಿ ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು.

ಆ) ಕ್ರಮ ಕೈಗೊಳ್ಳಲಾಗುವುದು.

ಕೊಪ್ಪಳ ತಾಲ್ಲೂಕಿನಲ್ಲಿರುವ ಶಿಕ್ಷಣ ಸಮಸ್ಯೆ

2239 - ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಉನ್ನತ ಶಿಕ್ಷಣ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ತಾಲ್ಲೂಕಿನ ನಗರದಲ್ಲಿ ಉನ್ನತ ಶಿಕ್ಷಣದ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಕೊಪ್ಪಳ ತಾಲ್ಲೂಕಿನ ವಿದ್ಯಾರ್ಥಿಗಳನ್ನು ತಮ್ಮ ಪ್ರೌಢಶಿಕ್ಷಣದ ನಂತರದ ಉನ್ನತ ಶಿಕ್ಷಣಕ್ಕಾಗಿ ಗದಗ-ಗಂಗಾವತಿ ಮುಂತಾದ ನಗರಗಳಿಗೆ ಹೋಗುತ್ತಿರುವುದು ಸರ್ಕಾರ ಗಮನಿಸಿದೆಯೇ?

ಇ) ಹಾಗಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಕೊಪ್ಪಳ ನಗರದಲ್ಲಿ ಅವಶ್ಯವಾಗಿರುವ ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳನ್ನು ತೆರೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಈ) ಹಾಗಿದ್ದರೆ, ಯಾವಾಗ ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು)

ಶ್ರೀ ಡಿ. ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಹೌದು.

ಇ) 1996-97ನೇ ಶೈಕ್ಷಣಿಕ ಸಾಲಿನಲ್ಲಿ ಪರಿಶೀಲಿಸಲಾಗುವುದು.

ಕಿರಿಯ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳಿಗೆ ಗ್ರಾಮೀಣ ಅಭ್ಯರ್ಥಿಗಳಿಗೆ ಕೃಪಾಂಕ.

2240 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಸರ್ಕಾರಿ ಕಿರಿಯ ಕಾಲೇಜುಗಳಲ್ಲಿ ಖಾಲಿಯಿರತಕ್ಕ ಉಪನ್ಯಾಸಕರ, ಹುದ್ದೆಗಳೆಷ್ಟು?

ಆ) ಇವುಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಇ) ಈ ಹುದ್ದೆಗಳನ್ನು ಭರ್ತಿ ಮಾಡುವಾಗ ಗ್ರಾಮೀಣ ಅಭ್ಯರ್ಥಿಗಳಿಗೆ ಕೃಪಾಂಕ ನೀಡಲಾಗುವುದೇ?

ಈ) ಇಲ್ಲದಿದ್ದಲ್ಲಿ ಅದಕ್ಕೆ ಕಾರಣಗಳೇನು?

ಶ್ರೀ ಹೆಚ್.ಜಿ. ಗೋವಿಂದಗೌಡ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) 864.

ಆ) ಕರ್ನಾಟಕ ಲೋಕಸೇವಾ ಆಯೋಗವು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ 864 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಣೆ ನೀಡುವ ಮೂಲಕ ಆಯ್ಕೆಯ ಪ್ರಕ್ರಿಯೆ ಪ್ರಾರಂಭಿಸಿದೆ. ಆಯ್ಕೆ ಪಟ್ಟಿ ಸರ್ಕಾರಕ್ಕೆ ಬಂದ ಕೂಡಲೇ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದು.

ಇ) ಇಲ್ಲ.

ಈ) ಪ್ರಸ್ತುತ ಜಾರಿಯಲ್ಲಿರುವ ನಿಯಮಾವಳಿಯ ಪ್ರಕಾರ ಗ್ರೂಪ್ 'ಸಿ' ಮತ್ತು ಗ್ರೂಪ್ 'ಡಿ' ಹುದ್ದೆಗಳಿಗೆ ಮಾತ್ರ ಗ್ರಾಮಾಂತರ ಅಭ್ಯರ್ಥಿಗಳಿಗೆ ಕೃಪಾಂಕ ನೀಡಲು ಅವಕಾಶವಿದೆ.
ಇದು ಗ್ರೂಪ್ 'ಬಿ' ಹುದ್ದೆಯಾದುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ನರ್ಸಿಂಗ್ ಕಾಲೇಜುಗಳಲ್ಲಿ ತರಬೇತಿ ಪಡೆದ ರಾಜ್ಯ ಶುಶ್ರೂಷಕರ ಹುದ್ದೆ.

2241 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ನರ್ಸಿಂಗ್ ಕಾಲೇಜುಗಳ ಸಂಖ್ಯೆ ಎಷ್ಟು? (ಸರ್ಕಾರಿ ಹಾಗೂ ಖಾಸಗೀ)

ಆ) ಪ್ರತಿವರ್ಷ ಎಷ್ಟು ವಿದ್ಯಾರ್ಥಿಗಳು ಈ ಕಾಲೇಜುಗಳಿಂದ ತರಬೇತಿ ಪಡೆದು ಹೊರಬರುತ್ತಿರರುವರು.

ಇ) ರಾಜ್ಯದ ಆಸ್ಪತ್ರೆಗಳಲ್ಲಿ ಖಾಲಿ ಇರತಕ್ಕ ಶುಶ್ರೂಷಕರ ಹುದ್ದೆಗಳ ಸಂಖ್ಯೆ ಎಷ್ಟು?

ಈ) ಈ ಹುದ್ದೆಗಳನ್ನು ಭರ್ತಿಮಾಡುವಾಗ ರಾಜ್ಯದ ಅಭ್ಯರ್ಥಿಗಳಿಗೆ ಪ್ರಾಶಸ್ತ್ಯ ನೀಡಲು ಸರ್ಕಾರ ನಿರ್ಧರಿಸಿದೆಯೇ?

ಶ್ರೀ ಎ.ಬಿ. ಪಾಟೀಲ್ (ವೈದ್ಯಕೀಯ ಶಿಕ್ಷಣ ಸಚಿವರು) :

ಅ) ಒಟ್ಟು 23

1) ಸರ್ಕಾರಿ ಶುಶ್ರೂಷಾ ಮಹಾವಿದ್ಯಾಲಯ ಬೆಂಗಳೂರು - 1

2) ಖಾಸಗೀ ನರ್ಸಿಂಗ್ ಕಾಲೇಜುಗಳ - 22

ಆ) ರಾಜ್ಯದಲ್ಲಿ ಒಟ್ಟು 23 ನರ್ಸಿಂಗ್ ಕಾಲೇಜುಗಳಿದ್ದು 760 ರಿಂದ 775 ರವರೆಗೆ ವಿದ್ಯಾರ್ಥಿಗಳು ಪ್ರತಿ ವರ್ಷ ತರಬೇತಿ ಪಡೆದು ಹೊರಬರುತ್ತಿರುವರು.